# ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಚಿತ್ರದುರ್ಗ

(ಪ್ರಧಾನ ಕಛೇರಿ: ಜಿಲ್ಲಾಧಿಕಾರಿಗಳ ಕಛೇರಿ ರಸ್ತೆ, ಚಿತ್ರದುರ್ಗ – 577501)

Email: md_cdccb@yahoo.co.in ದೂರವಾಣಿ ಸಂಖ್ಯೆ: 08194- 222 546


ಸಂಖ್ಯೆ:ಆಡಳಿತ & ಸಿಬ್ಬಂದಿ/ನೇಮಕಾತಿ/1977/2014-15 ದಿನಾಂಕ: 04.03.2015

## ನೇಮಕಾತಿ ಪ್ರಕಟಣೆ

ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಚಿತ್ರದುರ್ಗ ಇದರಲ್ಲಿ ಖಾಲಿ ಇರುವ ಈ ಕೆಳಕಂಡ ಹುದ್ದೆಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಆಹ್ವಾನಿಸಲಾಗಿದೆ. ಖುದ್ದಾಗಿ/ಅಂಚೆ/ಪ್ರತ್ಯೇಕವಾಗಿ ಅರ್ಜಿ ಕಳುಹಿಸಲು ಅವಕಾಶವಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಿದೆ. ನೇಮಕಾತಿ ಮಾಡಲು ಉದ್ದೇಶಿಸಿರುವ 19 ವಿವಿಧ ಹುದ್ದೆಗಳನ್ನು ಸರ್ಕಾರಿ ಆದೇಶದ ಪ್ರಕಾರ ಈ ಕೆಳಕಂಡಂತೆ ವರ್ಗೀಕರಿಸಿ ಮೀಸಲಿರಿಸಲಾಗಿದೆ.

**(1) ಹುದ್ದೆಗಳ ವಿವರ:**

| ಕ್ರ. ಸಂ. | ಹುದ್ದೆಯ ಹೆಸರು | ಒಟ್ಟು ಹುದ್ದೆಗಳು | ವರ್ಗಗಳ ವಿವರ | ಒಟ್ಟು ಹುದ್ದೆಗಳು | ಒಳಮೀಸಲಾತಿ | | | |
|---|---|---|---|---|---|---|---|---|
| | | | | | ಸಾಮಾನ್ಯ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕ |
| 1 | ಸಹಾಯಕ ಪ್ರಧಾನ ವ್ಯವಸ್ಥಾಪಕರು/ ಆಂತರಿಕ ಲೆಕ್ಕಪರಿಶೋಧಕರು /ಶಾಖಾಪರಿವೀಕ್ಷಣಾಧಿಕಾರಿಗಳು/ ಹಿರಿಯ ಶಾಖಾ ವ್ಯವಸ್ಥಾಪಕರು. | 02 | ಸಾಮಾನ್ಯ | 01 | 01 | | | |
| | | | ಪರಿಶಿಷ್ಟ ಜಾತಿ | 01 | 01 | | | |
| | | | ಒಟ್ಟು | 02 | 02 | | | |
| 2 | ಕಿರಿಯಶಾಖಾವ್ಯವಸ್ಥಾಪಕರು / ಪ್ರಥಮ ದರ್ಜೆ ಸಹಾಯಕರು / /ಲೆಕ್ಕಿಗರು /ಕ್ಷೇತ್ರಾಧಿಕಾರಿಗಳು | 02 | ಸಾಮಾನ್ಯ | 01 | 01 | | | |
| | | | ಪರಿಶಿಷ್ಟ ಜಾತಿ | 01 | 01 | | | |
| | | | ಒಟ್ಟು | 02 | 02 | | | |
| 3 | ದ್ವಿತೀಯ ದರ್ಜೆ ಸಹಾಯಕರು/ ಕಿರಿಯ ಸಹಾಯಕರು/ನಗದು ಗುಮಾಸ್ತರು/ಸೂಪರ್ ವೈಜರ್ | 14 | ಸಾಮಾನ್ಯ | 7 | 2 | 2 | 2 | 1 |
| | | | ಪರಿಶಿಷ್ಟಜಾತಿ | 3 | 1 | 1 | 1 | – |
| | | | ಪ್ರವರ್ಗ-1 | 1 | 1 | – | – | – |
| | | | ಪ್ರವರ್ಗ-2ಎ | 2 | 1 | – | 1 | – |
| | | | ಪ್ರವರ್ಗ-2ಬಿ | 1 | 1 | – | – | – |
| | | | ಒಟ್ಟು | 14 | 6 | 3 | 4 | 1 |
| 4 | ಕಂಪ್ಯೂಟರ್ ಇಂಜಿನಿಯರ್ | 01 | ಸಾಮಾನ್ಯ | 01 | 01 | | | |
| | | | ಒಟ್ಟು | 01 | 01 | | | |
| | ಒಟ್ಟು | 19 | | 19 | 11 | 3 | 4 | 1 |


DISTRICT CO-OP CENTRAL BANK
Chitradurga

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | |
|---|---|
| ಸಾಮಾನ್ಯ-General Merit | ಪರಿಶಿಷ್ಟ ಪಂಗಡ-Scheduled Tribe |
| ಪ್ರವರ್ಗ 1-Category I | ಮಾಜಿ ಸೈನಿಕರು-Ex-Military Person |
| ಪ್ರವರ್ಗ 2ಎ-Category 2A | ಗ್ರಾಮೀಣ ಅಭ್ಯರ್ಥಿ-Rural Candidate |
| ಪ್ರವರ್ಗ 2ಬಿ-Category 2B | ಅಂಗ ವಿಕಲರು-Physically handicapped Person |
| ಪ್ರವರ್ಗ 3ಎ-Category 3A | ಮಹಿಳಾ ಅಭ್ಯರ್ಥಿ-Female Candidate |
| ಪ್ರವರ್ಗ 3ಬಿ- Category 3B | |
| ಪರಿಶಿಷ್ಟ ಜಾತಿ-Scheduled Caste | |

ಪ್ರವರ್ಗದಲ್ಲಿ ಮೇಲಿನಂತೆ ಮೀಸಲಿಟ್ಟ ರಿಕ್ತ ಸ್ಥಾನಗಳಿಗೆ ಸೂಕ್ತ ಮಹಿಳಾ/ಗ್ರಾಮೀಣ/ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ಹುದ್ದೆಗಳನ್ನು ಆಯಾ ವರ್ಗಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ವೇತನ ಶ್ರೇಣಿ:**

| ಕ್ರ. ಸಂ. | ಹುದ್ದೆಗಳ ಹೆಸರು | ವೇತನ ಶ್ರೇಣಿ |
|---|---|---|
| 1 | ಸಹಾಯಕ ಪ್ರಧಾನವ್ಯವಸ್ಥಾಪಕರು/ ಅಂತರಿಕ ಲೆಕ್ಕ ಪರಿಶೋಧಕರು /ಶಾಖಾಪರಿವೀಕ್ಷಣಾಧಿಕಾರಿಗಳು /ಹಿರಿಯ ಶಾಖಾ ವ್ಯವಸ್ಥಾಪಕರು | ರೂ. 21600-600-24600-700-28800-800-33600-900-39000-1050-40050 ಮತ್ತು ನಿಯಮಾನುಸಾರ ಇತರೆ ಭತ್ಯೆಗಳು |
| 2 | ಕಿರಿಯ ಶಾಖಾ ವ್ಯವಸ್ಥಾಪಕರು/ ಲೆಕ್ಕಿಗರು/ಪ್ರಥಮ ದರ್ಜೆ ಸಹಾಯಕರು/ಕ್ಷೇತ್ರಾಧಿಕಾರಿಗಳು | ರೂ. 20000-500-21000-600-24600-700-28800-800-33600-900-36300 ಮತ್ತು ನಿಯಮಾನುಸಾರ ಇತರೆ ಭತ್ಯೆಗಳು |
| 3 | ಕಿರಿಯ ಸಹಾಯಕರು/ನಗದು ಗುಮಾಸ್ತರು/ಸೂಪರ್‌ವೈಜರ್ | ರೂ. 16000-400-17200-450-19000-500-21000-600-24600-700-28800-800-29600 ಮತ್ತು ನಿಯಮಾನುಸಾರ ಇತರೆ ಭತ್ಯೆಗಳು |
| 4 | ಕಂಪ್ಯೂಟರ್ ಇಂಜಿನೀಯರ್ | ರೂ. 16000-400-17200-450-19000-500-21000-600-24600-700-28800-800-29600 ಮತ್ತು ನಿಯಮಾನುಸಾರ ಇತರೆ ಭತ್ಯೆಗಳು |

- ಬ್ಯಾಂಕಿನಲ್ಲಿ ಖಾಲಿ ಇರುವ ಈ ಮೇಲಿನ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ನೇಮಕಾತಿ ಪ್ರಕ್ರಿಯೆಯ ಪೂರ್ಣ ವಿವರಗಳನ್ನು ಬ್ಯಾಂಕಿನ ಜಾಲ ತಾಣದಿಂದ (WEBSITE) www.recruit -app.com/cdccb-2015 ಪಡೆದು ತಾಕ್ಷಣಿಕ ಸೇವೆಯ (ONLINE) ಮೂಲಕವೇ ಸಲ್ಲಿಸತಕ್ಕದ್ದು.

THE DISTRICT CO-OP CENTRAL BANK LTD. Chitradurga

- ಅನುಸೂಚಿಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭಗಳಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.
- ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು. ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು.
- ಅರ್ಜಿ ನಮೂನೆಯನ್ನು ಬ್ಯಾಂಕಿನ ಜಾಲ ತಾಣದ ಮೂಲಕ ಡೌನ್ ಲೋಡ್ ಮಾಡಿಕೊಂಡು ಮುದ್ರಿಸಿ ಅಂಚೆ ಅಥವಾ ಇನ್ನಿತರೆ ಮಾಧ್ಯಮಗಳ ಮೂಲಕ ಸಲ್ಲಿಸಿದಲ್ಲಿ ಅವುಗಳನ್ನು ಗಣನೆಗೆ ತೆಗೆದುಕೊಳ್ಳದೆ ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳು ಅರ್ಜಿಗಳಲ್ಲಿ ಅಪೂರ್ಣ ಮಾಹಿತಿಗಳನ್ನು ನೀಡಿದ್ದಲ್ಲಿ ಅಂತಹ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳದೆ ತಿರಸ್ಕರಿಸಲಾಗುವುದು.
- ಬ್ಯಾಂಕಿನ ಸೂಚನೆಗಳನ್ನು ಅರಿಯದೆ ತಪ್ಪೆಸಗಿದಲ್ಲಿ ಬ್ಯಾಂಕು ಜವಾಬ್ದಾರರಾಗಿರುವುದಿಲ್ಲ.
- ನಿಗದಿತ ಶುಲ್ಕ ಸಂದಾಯ ಮಾಡದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## (2) ಅರ್ಜಿ ಶುಲ್ಕ :

| | | |
|---|---|---|
| 1. | ಸಾಮಾನ್ಯ ಅರ್ಹತೆ, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಗೆ ಸೇರಿದ ಅಭ್ಯರ್ಥಿಗಳು ಪಾವತಿಸಬೇಕಾದ ಅರ್ಜಿ ಶುಲ್ಕ | .ರೂ 800/- |
| 2. | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಮತ್ತು ಅಂಗವಿಕಲ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳು ಪಾವತಿಸಬೇಕಾದ ಅರ್ಜಿ ಶುಲ್ಕ | .ರೂ 400/- |

- ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ ಅಂತಹ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ ಪ್ರತ್ಯೇಕವಾಗಿ ಅರ್ಜಿ ಶುಲ್ಕವನ್ನು ಪಾವತಿಸತಕ್ಕದ್ದು.
- ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ ಕರ್ನಾಟಕ ರಾಜ್ಯದಲ್ಲಿನ ಯಾವುದೇ ವಿದ್ಯುನ್ಮಾನ ಪಾವತಿ (ಇ-ಪೇಮೆಂಟ್) E-payment Post Office, ಅಂಚೆ ಕಛೇರಿಗೆ ತೆರಳಿ ನಿಗಧಿತ ಶುಲ್ಕ + ಸೇವಾ ತೆರಿಗೆ ರೂ 23/-ನ್ನು ಪಾವತಿ ಮಾದತಕ್ಕದ್ದು.
- ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕವಾದ 31.03.2015 ನಂತರ ಶುಲ್ಕವನ್ನು ಸಂದಾಯ ಮಾದಲು ಅವಕಾಶ ಇರುವುದಿಲ್ಲ. ಡಿ.ಡಿ / ಪೋಸ್ಟಲ್ ಆರ್ಡರ್ /ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.
- ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.
- ಅರ್ಜಿಗಳನ್ನು ಭರ್ತಿ ಮಾಡಲು ಮತ್ತು ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ, ಆ ಹಿಂದಿನ ಕೆಲಸದ ದಿನವು ಅರ್ಜಿಗಳನ್ನು ಭರ್ತಿ ಮಾಡಲು ಮತ್ತು ಶುಲ್ಕ ಪಾವತಿಸಲು ಕೊನೆಯ ದಿನಾಂಕವಾಗುವುದು.

DISTRICT CO-OP CENTRAL BANK Chitradurga

(3) **ವಯೋಮಿತಿ :**ಅರ್ಜಿಗಳನ್ನು ಭರ್ತಿ ಮಾಡಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗಧಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ವರ್ಗೀಕರಣದ ವಿವರ | ಕನಿಷ್ಠ | ಗರಿಷ್ಠ |
|---|---|---|
| ಸಾಮಾನ್ಯ ವರ್ಗ | 18 | 35 |
| 2(ಎ), 2(ಬಿ), 3(ಎ), 3(ಬಿ) | 18 | 38 |
| ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಪ್ರವರ್ಗ–1 | 18 | 40 |

---

**(4)ಅಭ್ಯರ್ಥಿಗಳು ONLINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:**

ಹಂತ 1:–ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್ www.recruit-app.com /cdccb-2015ಅನ್ನು ತೆರೆದ ಕೂಡಲೆ ಕಂಪ್ಯೂಟರ್ ಪರದೆಯ ಮೇಲೆ ' **CHITRADURGA DCC BANK RECRUITMENT 2015'** ಎಂದು ಮೂಡುತ್ತದೆ. ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವ ಪೂರ್ವದಲ್ಲಿ ಅಧಿಸೂಚನೆ ಮತ್ತು ಸೂಚನೆಗಳನ್ನು ಕಡ್ಡಾಯವಾಗಿ ಓದತಕ್ಕದ್ದು ಮತ್ತು ಅಂತಿಮವಾಗಿ ನಿಯಮ ಮತ್ತು ಷರತ್ತುಗಳನ್ನು ಕೆಳಗಿನ ಚೆಕ್‌ಬಾಕ್ಸ್ ಅನ್ನು ಅದುಮುವ ಮೂಲಕ ಒಪ್ಪಿಕೊಳ್ಳತಕ್ಕದ್ದು ಮತ್ತು **Open Application** ಗುಂಡಿಯನ್ನು ಅದುಮಿ ಮುಂದುವರಿಯಿರಿ.

ಹಂತ 2:–ಸಂಬಂಧಪಟ್ಟ ಹುದ್ದೆಯನ್ನು ಆಯ್ಕೆ ಮಾಡಿ **Apply** ಗುಂಡಿಯನ್ನು ಅದುಮಿ ಅರ್ಜಿಯನ್ನು ಭರ್ತಿಮಾಡತಕ್ಕದ್ದು. ಅರ್ಜಿಯನ್ನು ಭರ್ತಿಮಾಡಿದ ನಂತರ ನಮೂದಿಸಿದ ವಿವರಗಳನ್ನು ಮತ್ತೊಮ್ಮೆ ಕೂಲಂಕುಷವಾಗಿ ಪರಿಶೀಲಿಸಿಕೊಂಡು, ಎಲ್ಲಾ ವಿವರಗಳು ಸರಿಯಾಗಿರುತ್ತವೆಂದು ಖಚಿತಪಡಿಸಿಕೊಂಡನಂತರ **Preview** ಗುಂಡಿಯನ್ನು ಅದುಮಿ ಮುಂದುವರಿಯಿರಿ.

ಹಂತ 3:–ನಿಮ್ಮ ಅರ್ಜಿಯ ಯಾವುದೇ ವಿವರಗಳ ಬದಲಾವಣೆ ಅಗತ್ಯವಿದ್ದರೆ ಪೂರ್ವದರ್ಶನ ಪುಟದಲ್ಲಿ **Edit**ಗುಂಡಿಯನ್ನು ಅದುಮಿ. ನಿಮ್ಮ ಅರ್ಜಿಯಲ್ಲಿನ ವಿವರಗಳು ಸರಿ ಇರುವುದನ್ನು ಖಚಿತಪಡಿಸಿಕೊಂಡು, ನಿಮ್ಮ ಸಹಿಯೊಂದಿಗಿನ ಪಾಸ್ ಪೋರ್ಟ್ ಗಾತ್ರದ ಸ್ಕ್ಯಾನ್ ಮಾಡಿದ ಭಾವಚಿತ್ರವನ್ನು ಅಪ್‌ಲೋಡ್ ಮಾಡುವ ಬಗ್ಗೆ **Next** ಗುಂಡಿಯನ್ನು ಅದುಮಿ.


**Note :–**ಈ ಹಂತದಲ್ಲಿ ಅಭ್ಯರ್ಥಿಯು ನೊಂದಾಯಿಸಿದ ಇಮೇಲ್ ವಿಳಾಸಕ್ಕೆ ಒಂದು ಸ್ವಯಂಚಾಲಿತ ಇಮೇಲ್ ಮೂಲಕ ಅವರ **Application Id**ಮತ್ತು **Password** ಅನ್ನು ಕಳುಹಿಸಲಾಗುವುದು. ಅಭ್ಯರ್ಥಿಯು **Edit Application** ಗುಂಡಿಯನ್ನು ಅದುಮಿ, ಅವರ **Application Id**ಮತ್ತು **Password** ಅನ್ನು ಬಳಸಿ ತಮ್ಮ ವಿವರಗಳನ್ನು ಅಪ್‌ಲೋಡ್ ಮಾಡಬಹುದು ಅಥವಾ ಅಪ್‌ಲೋಡ್ ಮಾಡಿದ ಮಾಹಿತಿಯನ್ನು ಬದಲಾಯಿಸಬಹುದು.

THE DISTRICT CO-OP CENTRAL BANK LTD. Chitradurga

<u>ಹಂತ 4:-</u>ನೀವು ಸಹಿಯೊಂದಿಗಿನ ಸ್ಕ್ಯಾನ್ ಮಾಡಿದ ಪಾಸ್ ಪೋರ್ಟ್ ಗಾತ್ರದ ಭಾವಚಿತ್ರವನ್ನು ಆಯ್ಕೆ ಮಾಡುವ ಬಗ್ಗೆ **Browse** ಗುಂಡಿಯನ್ನು ಅದುಮಿ ಮತ್ತು ನಿಮ್ಮ ಸಹಿಯೊಂದಿಗಿನ ಭಾವಚಿತ್ರವನ್ನು ಪೂರ್ವದರ್ಶನ ಮಾಡಲು **Submit** ಗುಂಡಿಯನ್ನು ಅದುಮಿ. ಒಂದು ವೇಳೆ ತಪ್ಪಾದ ಭಾವಚಿತ್ರವನ್ನು ಅಪ್‌ಲೋಡ್ ಮಾಡಿದ್ದಲ್ಲಿ ಮೇಲಿನ ಕ್ರಮವನ್ನು ಪುನರಾವರ್ತಿಸಿ ಅಥವಾ ಮುಂದಿನ ಪುಟದ ಬಗ್ಗೆ **Next** ಗುಂಡಿಯನ್ನು ಅದುಮಿ. ಅಭ್ಯರ್ಥಿಯು ಈ ಹಂತದಲ್ಲಿ **Next** ಗುಂಡಿಯನ್ನು ಅದುಮಿದರೆ ತಮ್ಮ ಅರ್ಜಿಯಲ್ಲಿನ ಯಾವುದೇ ವಿವರವನ್ನು ಬದಲಾಯಿಸಲು ಸಾಧ್ಯವಿರುವುದಿಲ್ಲ.

ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವನ್ನು ಖಾಲಿ ಬಿಳಿ ಕಾಗದದ ಮೇಲೆ ಇರಿಸಿ, ಕಪ್ಪು ನಕ್ಕೆ/ಮಾರ್ಕರ್ ಪೆನ್ನಿನಿಂದ ಭಾವಚಿತ್ರದ ಕೆಳಗೆ ಸಹಿ ಮಾಡಿರುವುದನ್ನು ಮತ್ತು ಅಂಕಣದೊಳಗೆ ಇರುವುದನ್ನು ಖಚಿತಪಡಿಸಿಕೊಳ್ಳಿ. ಯಾವುದೇ ಕಾರಣಕ್ಕೂ ಭಾವ ಚಿತ್ರದ ಮೇಲೆ ಸಹಿ ಮಾಡಬಾರದು.

| | |
|---|---|
| ಕಡತ ಗಾತ್ರ<100ಕೆ.ಬಿ | <u>ಪಾಸ್ ಪೋರ್ಟ್ ಭಾವಚಿತ್ರ ಮತ್ತು ಸಹಿ ಅಳತೆ</u> |
| ಡಿಪಿಐ ಸೆಟ್ಟಿಂಗ್ =100 ಡಿಪಿಐ | |
| ಆಕೃತಿ ಪ್ರಮಾಣ =100% | |
| ಬಣ್ಣ | |
| ಜೆ ಪಿ ಜಿ/ಜೆ ಪಿ ಇ ಜಿ | |




**<u>Note :-</u>**ಅಭ್ಯರ್ಥಿಯು **Photo Upload** ಗುಂಡಿಯನ್ನು ಅದುಮಿ, ಅವರ **Application Id** ಮತ್ತು **Password** ಅನ್ನು ಬಳಸಿ ತಮ್ಮ ಸಹಿಯೊಂದಿಗಿನ ಭಾವಚಿತ್ರವನ್ನು ಅಪ್‌ಲೋಡ್ ಮಾಡಬಹುದು ಅಥವಾ ತಪ್ಪಾದಲ್ಲಿ ಅದನ್ನು ಬದಲಾಯಿಸಬಹುದು. ಒಂದು ವೇಳೆ ಅಭ್ಯರ್ಥಿಯು ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡದಿದ್ದರೆ ಅವರ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

<u>ಹಂತ 5:-</u>ಅರ್ಜಿಯ ಮುದ್ರಣವನ್ನು ಪಡೆಯಲು **Print Application** ಗುಂಡಿಯನ್ನು ಅದುಮಿ, ಅನಂತರವೇ **Application Preview** ಮೂಡಲಿದ್ದು, ಅಭ್ಯರ್ಥಿಗಳು ಅರ್ಜಿಯ ಪ್ರತಿಯನ್ನು ಕಡ್ಡಾಯವಾಗಿ **Download** ಮಾಡಿಕೊಳ್ಳತಕ್ಕದ್ದು. **Chitradurga DCC Bank** ಅಪೇಕ್ಷಿಸಿದಾಗ ಈ ಪ್ರತಿಯನ್ನು ಹಾಜರುಪಡಿಸಬೇಕು.

<u>ಹಂತ 6:-</u> ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ **Post Office Challan** ಗುಂಡಿಯನ್ನು ಅದುಮಿ **challan** ಪ್ರತಿಯನ್ನು **Download** ಮಾಡಿಕೊಂಡು ಕರ್ನಾಟಕ ರಾಜ್ಯದಲ್ಲಿನ ಯಾವುದೇ ಇ-ಪಾವತಿ ಅಂಚೆ ಕಛೇರಿಗೆ ಹೋಗಿ, [**ನಿಗದಿತ ಅರ್ಜಿ ಶುಲ್ಕ + ಸೇವಾ ತೆರಿಗೆ (ರೂ 23/-)**ಯನ್ನು] ಪಾವತಿ ಮಾಡಿ. ಅಂತಿಮವಾಗಿ **ಪೋಸ್ಟ್ ಆಫೀಸ್ ಸ್ಟಿಕ್ಕರ್** ಅನ್ನು ನಿಮ್ಮ **challan** ಪ್ರತಿಯ ಮೇಲೆ ಅಂಟಿಸುವುದರಿಂದ ನಿಮ್ಮ ಶುಲ್ಕ ಪಾವತಿಯನ್ನು ದೃಢಪಡಿಸಲಾಗುತ್ತದೆ.

**<u>Note :-</u>**ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ **31.03.2015**ರ ನಂತರ ಶುಲ್ಕವನ್ನು ಸಂದಾಯ ಮಾಡಲು ಅವಕಾಶವಿರುವುದಿಲ್ಲ. ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

DISTRICT CO-OP CENTRAL BANK LTD
Chitradurga

ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ. ಅಥವಾ ಅದನ್ನು ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

**(6) ಅರ್ಜಿ ಸಲ್ಲಿಸುವ ವಿಧಾನ**

ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್ ಸೈಟ್ **www.recruit-app.com/cdccb-2015** ನ್ನು ತೆರೆದಕೂಡಲೇ ಕಂಪ್ಯೂಟರ್ ಪರದೆಯ ಮೇಲೆ CHITRADURGA DCC BANK RECRUITMENT 2015" ಎಂದು ಮೂಡುತ್ತದೆ. ಇದರಲ್ಲಿ ಅಧಿಸೂಚನೆಯ ವಿವರಗಳು ಮತ್ತು ಅರ್ಜಿ ಸಲ್ಲಿಸುವ ಸೂಚನೆಗಳನ್ನು ಬಿತ್ತರಿಸಲಾಗಿದ್ದು ತಪ್ಪದೇ ಓದಿಕೊಂಡು ಅದರಂತೆ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

| | |
|---|---|
| ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಪ್ರಾರಂಭಿಕ ದಿನಾಂಕ | 9.03.2015 |
| ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ | 30.03.2015 |
| ಶುಲ್ಕ ಪಾವತಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ | 31.03.2015 |

**ವಿಶೇಷ ಸೂಚನೆ: –** ONLINE ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help Line) **9632320817** ಮತ್ತು **9686392808** ಅನ್ನು ಬೆಳಿಗ್ಗೆ 10.00ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

**(7) ಶೈಕ್ಷಣಿಕ ವಿದ್ಯಾರ್ಹತೆ:ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು.ಕನ್ನಡ ಓದಲು ಮತ್ತು ಬರೆಯಲು ಕಡ್ಡಾಯವಾಗಿ ತಿಳಿದಿರಬೇಕು.**

| ಕ್ರ.ಸಂ. | ಹುದ್ದೆಯ ಹೆಸರು | ವಿದ್ಯಾರ್ಹತೆ |
|---|---|---|
| 1. | ಸಹಾಯಕ ಪ್ರಧಾನ ವ್ಯವಸ್ಥಾಪಕರು/ ಆಂತರಿಕ ಲೆಕ್ಕಪರಿಶೋಧಕರು/ ಶಾಖಾ ಪರಿವೀಕ್ಷಣಾಧಿಕಾರಿಗಳು/ ಹಿರಿಯ ಶಾಖಾ ವ್ಯವಸ್ಥಾಪಕರು | ಅಂಗೀಕೃತ ವಿಶ್ವ ವಿದ್ಯಾಲಯದಿಂದ M.Com/M.C.A./ MSC/MSC(Agriculture)/MBA(Finance) ಪದವಿಯಲ್ಲಿ ಶೇ.60ರಷ್ಟು ಅಂಕಗಳನ್ನು ಪಡೆದಿರಬೇಕು. ಕಂಪ್ಯೂಟರ್ ಜ್ಞಾನ ಕಡ್ಡಾಯವಾಗಿ ಹೊಂದಿರಬೇಕು. |
| 2. | ಕಿರಿಯ ಶಾಖಾ ವ್ಯವಸ್ಥಾಪಕರು/ ಲೆಕ್ಕಿಗರು/ಪ್ರಥಮ ದರ್ಜೆ ಸಹಾಯಕರು/ ಕ್ಷೇತ್ರಾಧಿಕಾರಿಗಳು | ಅಂಗೀಕೃತ ವಿಶ್ವ ವಿದ್ಯಾಲಯದಿಂದ B.Com/BBM/ BSC / BCA/BSC( Comp. science )ಪದವಿಯಲ್ಲಿ ಶೇ.60 ರಷ್ಟು ಅಂಕಗಳನ್ನು ಪಡೆದಿರಬೇಕು. ಕಂಪ್ಯೂಟರ್ ಜ್ಞಾನ ಕಡ್ಡಾಯವಾಗಿ ಹೊಂದಿರಬೇಕು. |
| 3. | ದ್ವಿತೀಯ ದರ್ಜೆ ಸಹಾಯಕರು/ಕಿರಿಯ ಸಹಾಯಕರು/ನಗದು ಗುಮಾಸ್ತರು/ ಸೂಪರ್ ವೈಜರ್ | ಅಂಗೀಕೃತ ವಿಶ್ವ ವಿದ್ಯಾಲಯದಿಂದ B.Com/BBM / BSC / BCA/BSC( Comp. science )ಪದವಿಯಲ್ಲಿ ಶೇ.55 ರಷ್ಟು ಅಂಕಗಳನ್ನು ಪಡೆದಿರಬೇಕು. ಕಂಪ್ಯೂಟರ್ ಜ್ಞಾನ ಕಡ್ಡಾಯವಾಗಿ ಹೊಂದಿರಬೇಕು. |
| 4. | ಕಂಪ್ಯೂಟರ್ ಇಂಜಿನೀಯರ್ | ಅಂಗೀಕೃತ ವಿಶ್ವ ವಿದ್ಯಾಲಯದಿಂದ BE Computer Science/BSC in computer science /BCA ಪದವಿಯಲ್ಲಿ ಶೇ.60ರಷ್ಟು ಅಂಕಗಳನ್ನು ಪಡೆದಿರಬೇಕು |

CENTRAL BANK LTD., * THE DIST... Chitradurga

ಮೇಲ್ಕಂಡಂತೆ ನಿಗದಿಪಡಿಸಿರುವ ಸ್ನಾತಕೋತ್ತರ ಪದವಿ ಮತ್ತು ಪದವಿಗಳನ್ನು ಹೊರತು ಪಡಿಸಿ ಇತರೆ ಯಾವುದೇ ಸ್ನಾತಕೋತ್ತರ ಪದವಿ/ತಾಂತ್ರಿಕ ಪದವಿ ವಿದ್ಯಾರ್ಹತೆಗಳನ್ನು ಪರಿಗಣಿಸಲಾಗುವುದಿಲ್ಲ ಮತ್ತು ನಿಗದಿಪಡಿಸಿದ ಶೇಕಡವಾರು ಅಂಕಗಳಿಗಿಂತ ಕಡಿಮೆ ಅಂಕಗಳನ್ನು ಗಳಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

(8) ಆಯ್ಕೆ ವಿಧಾನ:

1 1.ಸಹಾಯಕ ಪ್ರಧಾನ ವ್ಯವಸ್ಥಾಪಕರು/ಆಂತರಿಕ ಲೆಕ್ಕಪರಿಶೋಧಕರು/ ಶಾಖಾ ಪರಿವೀಕ್ಷಣಾಧಿ ಕಾರಿಗಳು / ಹಿರಿಯ ಶಾಖಾ ವ್ಯವಸ್ಥಾಪಕರು
2.ಕಿರಿಯ ಶಾಖಾ ವ್ಯವಸ್ಥಾಪಕರು/ಲೆಕ್ಕಿಗರು/ಪ್ರಥಮ ದರ್ಜೆ ಸಹಾಯಕರು/ ಕ್ಷೇತ್ರಾಧಿಕಾರಿಗಳು,
3.ಕಿರಿಯ ಸಹಾಯಕರು/ನಗದು ಗುಮಾಸ್ತರು/ಸೂಪರ್ ವೈಜರ್
4.ಕಂಪ್ಯೂಟರ್ ಇಂಜಿನೀಯರ್

ಈ ಮೇಲ್ಕಂಡ ಹುದ್ದೆಗಳಾದ ಸಹಾಯಕ ಪ್ರಧಾನ ವ್ಯವಸ್ಥಾಪಕರು, ಕಿರಿಯ ಶಾಖಾ ವ್ಯವಸ್ಥಾಪಕರು, ಕಂಪ್ಯೂಟರ್ ಇಂಜಿನೀಯರ್ ಹುದ್ದೆಗಳಿಗೆ ಸಂಬಂಧಿಸಿದಂತೆ ಬ್ಯಾಂಕಿಗೆ ಬರುವ ಒಟ್ಟು ಅರ್ಜಿಗಳನ್ನು ವರ್ಗವಾರು ಕಾಯ್ದಿರಿಸಿದ ಸ್ಥಾನಗಳಿಗೆ ವಿಂಗಡಿಸಿ ಸ್ನಾತಕೋತ್ತರ ಪದವಿ/ ಪದವಿಯಲ್ಲಿ ಕನಿಷ್ಠ ಶೇ 60 ರಷ್ಟು ಸರಾಸರಿ ಅಂಕ ಪಡೆದಿರುವ ಎಲ್ಲಾ ಅಭ್ಯರ್ಥಿಗಳಿಗೆ ಮತ್ತು ಕಿರಿಯ ಸಹಾಯಕರಿಗೆ ಅರ್ಜಿಸಲ್ಲಿಸುವ ಕನಿಷ್ಟ ಶೇ.55ಅಂಕ ಪಡೆದ ಎಲ್ಲಾ ಅಭ್ಯರ್ಥಿಗಳಿಗೆ 200 ಅಂಕಗಳ ಲಿಖಿತ ಪರೀಕ್ಷೆಗೆ ಕರೆಯಲಾಗುವುದು ಹಾಗೂ ಹುದ್ದೆವಾರು ಪ್ರತ್ಯೇಕ ಲಿಖಿತ ಪರೀಕ್ಷೆ ನಡೆಸಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇ.85ಕ್ಕೆ ಇಳಿಸಿ ಪ್ರಾಪ್ತವಾಗುವ ಅಂಕಗಳ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಿ ಅದನ್ನು ಆಧರಿಸಿ ಅಭ್ಯರ್ಥಿಗಳನ್ನು 1:5 ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನಕ್ಕೆ ನಿಗದಿಪಡಿಸಲಾದ ಅಂಕಗಳು 15(ಹದಿನೈದು). ಸಹಾಯಕ ಪ್ರಧಾನ ವ್ಯವಸ್ಥಾಪಕರು, ಕಿರಿಯ ಶಾಖಾ ವ್ಯವಸ್ಥಾಪಕರು, ಕಿರಿಯ ಸಹಾಯಕರ ಹುದ್ದೆಗಳಿಗೆ ಲಿಖಿತ ಪರೀಕ್ಷೆಯನ್ನು ಈ ಕೆಳಕಂಡ ವಿಷಯಗಳ ಮೇಲೆ ನಡೆಸಲಾಗುವುದು.

| ಕ್ರ.ಸಂ. | ವಿಷಯ | ಅಂಕಗಳು |
|---|---|---|
| 1 | ಕನ್ನಡ ಭಾಷೆ | 40 |
| 2 | ಇಂಗ್ಲೀಷ್ ಭಾಷೆ | 30 |
| 3 | ಸಾಮಾನ್ಯ ಜ್ಞಾನ | 30 |
| 4 | ಸಹಕಾರ ಮತ್ತು ಬ್ಯಾಂಕಿಂಗ್ | 100 |
| | ಒಟ್ಟು ಅಂಕಗಳು | 200 |

ಲಿಖಿತ ಪರೀಕ್ಷೆಗೆ ಸಹಕಾರ ಮತ್ತು ಬ್ಯಾಂಕಿಂಗ್ ವಿಷಯಕ್ಕೆ ಸಂಬಂಧಿಸಿದ ಪಠ್ಯಕ್ರಮ ಈ ಕೆಳಕಂಡಂತೆ ಇರುತ್ತದೆ.

(ಅ) ಸಹಕಾರ ಚಳುವಳಿಯ ಇತಿಹಾಸ
(ಆ) ದೇಶದ ಅರ್ಥ ವ್ಯವಸ್ಥೆಯಲ್ಲಿ ಸಹಕಾರಿ ಸಂಘಗಳ ಪಾತ್ರ.
(ಇ) ಸಹಕಾರ ಸಂಘಗಳ ರಚನೆ, ಆಡಳಿತ ಕಾರ್ಯನಿರ್ವಹಣೆ ಮತ್ತು ಲೆಕ್ಕಪತ್ರ ನಿರ್ವಹಣೆ
(ಈ) ಸಹಕಾರಿ ಕೃಷಿ ಪತ್ತಿನ ವ್ಯವಸ್ಥೆ
(ಉ) ಸಹಕಾರ ಸಂಘಗಳ ಕಾನೂನು
(ಊ) ಬ್ಯಾಂಕಿಂಗ್ ರೆಗ್ಯೂಲೇಷನ್ ಕಾಯ್ದೆ
(ಋ) ನೆಗೋಷಿಯಬಲ್ ಇನ್ಸ್ ಟ್ರೂಮೆಂಟ್ ಕಾಯ್ದೆ
(ಎ) ಕಂಪನಿಗಳ ಕಾಯ್ದೆ
(ಏ) ಭಾರತೀಯ ರಿಸರ್ವ್ ಬ್ಯಾಂಕ್ ಮತ್ತು ನಬಾರ್ಡ್ ಕಾಯ್ದೆಗಳು

ಕಂಪ್ಯೂಟರ್ ಇಂಜಿನೀಯರ್ ಹುದ್ದೆಗೆ ಲಿಖಿತ ಪರೀಕ್ಷೆಯನ್ನು ಈ ಕೆಳಕಂಡ ವಿಷಯದ ಮೇಲೆ ನಡೆಸಲಾಗುವುದು.

| ಕ್ರ.ಸಂ. | ವಿಷಯ | ಅಂಕಗಳು |
|---|---|---|
| 1 | ಕನ್ನಡ ಭಾಷೆ | 40 |
| 2 | ಇಂಗ್ಲೀಷ್ ಭಾಷೆ | 30 |
| 3 | ಸಾಮಾನ್ಯ ಜ್ಞಾನ | 30 |
| 4 | ಸಹಕಾರ ಮತ್ತು ಬ್ಯಾಂಕಿಂಗ್ | 30 |
| 5 | Computer Technology | 70 |
| | ಒಟ್ಟು ಅಂಕಗಳು | 200 |

DISTRICT CO-OP CENTRAL BANK LTD. Chitradurga

ಕಂಪ್ಯೂಟರ್ ಇಂಜಿನೀಯರ್ ಹುದ್ದೆಯ ಲಿಖಿತ ಪರೀಕ್ಷೆಗೆ ಸಂಬಂಧಿಸಿದಂತೆ Computer Technology ಪಠ್ಯಕ್ರಮ ಈ ಕೆಳಕಂಡಂತಿರುತ್ತದೆ.

Computer - Hardware, Software , Generation of computers
Computer Languages, a small programme, programme logic and controls
Networking concepts - LAN WAN
Internet protocols
Data base and Data base Management
Core Banking Concepts
Quantitative aptitude, Reasoning

ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇ.85ಕ್ಕೆ ಇಳಿಸಿ ಪ್ರಾಪ್ತವಾಗುವ ಅಂಕಗಳಿಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಸೇರಿಸಿ ಪ್ರಾಪ್ತವಾಗುವ ಅಂಕ ಹಾಗೂ ಸಹಕಾರಿ ವಿಷಯದಲ್ಲಿ ಸ್ನಾತಕೋತ್ತರ ಪದವಿ/ಪದವಿ/ಡಿಪ್ಲೊಮೊ ವಿದ್ಯಾರ್ಹತೆ ಹೊಂದಿದ್ದಲ್ಲಿ ಪ್ರಾಪ್ತವಾಗುವ 1(ಒಂದು) ವಿಶೇಷ ಅಂಕವನ್ನು ಸೇರಿಸಿ ಈ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಿ (Merit List) ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆಯ ಪಟ್ಟಿಯನ್ನು ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

**ಲಿಖಿತ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು. ಲಿಖಿತ ಪರೀಕ್ಷೆ ನಡೆಯುವ ಸ್ಥಳ, ದಿನಾಂಕ ಮತ್ತು ವೇಳೆ ಇವುಗಳ ವಿವರಗಳನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು.**

<u>ಅರ್ಹತಾ ಷರತ್ತುಗಳು:</u>

- ಭಾರತೀಯ ನಾಗರೀಕನಾಗಿರತಕ್ಕದ್ದು.
- ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ಇದ್ದಲ್ಲಿ, ನೇಮಕಾತಿಗೆ ಅರ್ಹರಾಗುವುದಿಲ್ಲ.
- ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಅತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
- ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಬ್ಯಾಂಕು ಕಾಯ್ದಿರಿಸಿಕೊಂಡಿದೆ.
- ನಿಗಧಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**<u>ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:-</u>**

ಮೀಸಲಾತಿ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು:-

**ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:- ನಮೂನೆ 'ಡಿ'**

**ಆ) ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು:- ನಮೂನೆ 'ಇ'**

**ಇ) ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು: ನಮೂನೆ 'ಎಫ್'**

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಸೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂದರೆ ಹಿಂದುಳಿದ ವರ್ಗಗಳ ಪ್ರವರ್ಗ -2ಎ, ಪ್ರವರ್ಗ - 2ಬಿ, ಪ್ರವರ್ಗ-3 ಎ ಮತ್ತು ಪ್ರವರ್ಗ - 3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅರ್ಜಿಯ ನಿಗದಿತ ಸ್ಥಳದಲ್ಲಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ನಮೂದಿಸತಕ್ಕದ್ದು ಹಾಗೂ ಅದೇ ಪ್ರಮಾಣ ಪತ್ರವನ್ನು ಸಂದರ್ಶನ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

**<u>ಮಾಜಿ ಸೈನಿಕರು ಅಥವಾ ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿ:-</u>**

ಮಾಜಿ ಸೈನಿಕರು ಅಥವಾ ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು, ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸಿರುತ್ತಿರುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಮೂಲ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

<u>ಗ್ರಾಮೀಣ ಅಭ್ಯರ್ಥಿ:-</u>

ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೇನೆನಿ 2001 ದಿನಾಂಕ: 13-02-2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ -2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗದ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ -2 ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ಮಿಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ.)

<u>ಅಂಗವಿಕಲ ಅಭ್ಯರ್ಥಿ:-</u>

ಸರ್ಕಾರದ ಅಧಿಸೂಚನೆಗಳನ್ವಯ ಅಂಗವಿಕಲರಿಗೆ ಮೀಸಲಾತಿಯನ್ನು ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ/115/ಸೇನೆನಿ 2005, ದಿನಾಂಕ: 19-11-2005 ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರದಿಂದ ಪ್ರಮಾಣ ಪತ್ರ ಪಡೆದುಕೊಂಡಿರತಕ್ಕದ್ದು. ಬೇರೆ ನಮೂನೆಯಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಪ್ರಮಾಣ ಪತ್ರಗಳನ್ನು ಸಂದರ್ಶನ ವೇಳೆ ಹಾಜರುಪಡಿಸತಕ್ಕದ್ದು.

**<u>ವಿಶೇಷ ಸೂಚನೆಗಳು :</u>** ಅಪೂರ್ಣವಾಗಿ ಭರ್ತಿ ಮಾಡಿದ ಅರ್ಜಿ, ಅಪೂರ್ಣವಾದ ಭಾವ ಚಿತ್ರ ಹಾಗೂ ಅಪೂರ್ಣವಾದ ಸಹಿಯೊಂದಿಗೆ upload ಮಾಡಿದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗಧಿತ ನಮೂನೆಯಲ್ಲಿ **ತಾಕ್ಷಣಿಕ ಸೇವೆಯ (ONLINE)** ಮೂಲಕ ಭರ್ತಿ ಮಾಡಿ upload ಮಾಡಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಅದೇ ಮೀಸಲಾತಿ ಪ್ರಮಾಣ ಪತ್ರದ / ಇತರೆ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಸಂದರ್ಶನಕ್ಕೆ/ ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಪರಿಶೀಲನೆಗೆ ಹಾಜರುಪಡಿಸಬೇಕು. ನಿಗಧಿತ ನಮೂನೆಯಲ್ಲದೆ ಅಥವಾ ಅರ್ಜಿ ಭರ್ತಿ ಮಾಡಲು ನಿಗಧಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ತಪ್ಪಿದಲ್ಲಿ ಇವರ ಮೀಸಲಾತಿಯನ್ನು ತಿರಸ್ಕರಿಸಲಾಗುವುದು/ ಅಭ್ಯರ್ಥಿಗಳನ್ನು ಅನರ್ಹಗೊಳಿಸಲಾಗುವುದು.

DISTRICT CO-OP CENTRAL BANK Chitradurga

**ಸಂದರ್ಶನಕ್ಕೆ/ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಸಲ್ಲಿಸಬೇಕಾದ ದಾಖಲೆಗಳು:-**

1. ಹುದ್ದೆಗೆ ನಿಗಧಿಪಡಿಸಿದ ಶುಲ್ಕವನ್ನು ಅಂಚೆ ಕಛೇರಿಯಿಂದ ವಿದ್ಯುನ್ಮಾನ ಪಾವತಿ (ಇ-ಪೇಮೆಂಟ್) ಮಾಡಿದ ಬಗ್ಗೆ ರಸೀದಿ.
2. ಹುದ್ದೆಗಳಿಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ / ಸೆಮಿಸ್ಟರ್‌ಗಳ ಅಂಕಪಟ್ಟಿಗಳು
3. ನಿರಾಕ್ಷೇಪಣೆ ಪತ್ರ ( ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ )
4. ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಮೃತಪಟ್ಟಿದ್ದಲ್ಲಿ ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
5. ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3 ಬಿ ಗಳ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ(ಮೀಸಲಾತಿ ಕೋರಿದ್ದಲ್ಲಿ)
6. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
7. ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
8. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಅಂಕಪಟ್ಟಿ ಅಥವಾ ಕ್ಯುಮುಲೇಟೀವ್ ರೆಕಾರ್ಡ್‌ನ ಜೆರಾಕ್ಸ್ ಪ್ರತಿಯನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಮೂಲ ದಾಖಲೆಗಳೊಂದಿಗೆ ಸಂದರ್ಶನ / ಪರಿಶೀಲನೆ ವೇಳೆಯಲ್ಲಿ ಹಾಜರುಪಡಿಸತಕ್ಕದ್ದು.
9. ನಿಗಧಿಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿಯ ಜೆರಾಕ್ಸ್ ಪ್ರತಿಯನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಮೂಲ ದಾಖಲೆಗಳೊಂದಿಗೆ ಸಂದರ್ಶನ / ಪರಿಶೀಲನೆ ವೇಳೆಯಲ್ಲಿ ಹಾಜರುಪಡಿಸತಕ್ಕದ್ದು.
10. ಮೀಸಲಾತಿ ಪ್ರಮಾಣ ಪತ್ರ ಇತ್ಯಾದಿಗಳ ಬಗ್ಗೆ ಅಭ್ಯರ್ಥಿಯು ಖಾತರಿಪಡಿಸಿಕೊಂಡು ಅರ್ಜಿ ಸಲ್ಲಿಸುವುದು ಅವರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ.
11. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.
12. ಯಾವುದೇ ಸಂದರ್ಭದಲ್ಲಿ, ಯಾವುದೇ ಕಾರಣವನ್ನು ನೀಡದೆ ನೇಮಕಾತಿ ಪ್ರಕ್ರಿಯೆಯನ್ನು ರದ್ದುಗೊಳಿಸುವ ,ತಡೆಹಿಡಿಯುವ, ಬದಲಾಯಿಸುವ ಅಧಿಕಾರವನ್ನು ಬ್ಯಾಂಕು ಹೊಂದಿರುತ್ತದೆ.
13. ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷ ಅವಧಿಯ ಪರೀಕ್ಷಾರ್ಥ ಸೇವೆಯಲ್ಲಿರಬೇಕಾಗುತ್ತದೆ. ಆಯ್ಕೆಗೊಂಡ ಅಭ್ಯರ್ಥಿಗಳು ಬ್ಯಾಂಕಿನಿಂದ ಸೂಚಿಸಲ್ಪಟ್ಟಂತೆ ಠೇವಣಿ ಹಾಗೂ ವೈಯಕ್ತಿಕ ಭದ್ರತೆ ನೀಡಬೇಕಾಗುತ್ತದೆ.
14. ಭರ್ತಿ ಮಾಡಬೇಕಾಗಿರುವ ಮೇಲಿನ ಎಲ್ಲಾ ಹುದ್ದೆಗಳನ್ನು ಕರ್ನಾಟಕ ಸರ್ಕಾರದ ಮೀಸಲಾತಿ ಆದೇಶದ ರೀತ್ಯಾ ಮೀಸಲಾತಿ ನೀಡಿ ನೇಮಕಾತಿ ಮಾಡಲಾಗುವುದು.
15. ಕೇಂದ್ರ ಸರ್ಕಾರ / ರಾಜ್ಯ ಸರ್ಕಾರ / ಯಾವುದೇ ಅರೆ ಸರ್ಕಾರಿ / ಖಾಸಗಿ ಅಥವಾ ಯಾವುದೇ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರು ಸಕ್ಷಮ ಪ್ರಾಧಿಕಾರದಿಂದ ನಿಗಧಿತ ನಮೂನೆಯಲ್ಲಿ ದೃಢೀಕರಿಸಿ ನೀಡುವುದು.
16. ಮೇಲ್ಕಂಡ ಹುದ್ದೆಗಳನ್ನು ಭರ್ತಿ ಮಾಡುವುದು ಬ್ಯಾಂಕಿನಲ್ಲಿ ಅಂತಿಮವಾಗಿ ಲಭ್ಯವಾಗಬಹುದಾದ ಹುದ್ದೆಗಳನ್ನು ಅವಲಂಬಿಸಿರುತ್ತದೆ. ಆದುದರಿಂದ ಮೇಲ್ಕಂಡ ಹುದ್ದೆಗಳ ಸಂಖ್ಯೆಯು ಬದಲಾವಣೆಗೆ ಒಳಪಟ್ಟಿರುತ್ತದೆ.
17. ಬ್ಯಾಂಕಿನ (ನೇಮಕಾತಿ ಪ್ರಾಧಿಕಾರದ) ಸೂಚನೆಗಳನ್ನು ಪಾಲಿಸದೆ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

CO-OP CENTRAL BANK LTD. Chitradurga

<u>ಇತರೆ :</u>

- ತಾಕ್ಷಣಿಕ ಸೇವೆಯ (ONLINE) ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್ ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.
- ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಅನುಮತಿಯನ್ನು ಪಡೆದಿಟ್ಟುಕೊಂಡರತಕ್ಕದ್ದು ಹಾಗೂ ವಿವರಗಳನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು ಮತ್ತು ಇದೇ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಸಂದರ್ಶನದ / ಮೂಲ ದಾಖಲಾತಿಯ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು ತಪ್ಪಿದಲ್ಲಿ ಅಭ್ಯರ್ಥಿಯ ಆಯ್ಕೆಯನ್ನು ಅನರ್ಹಗೊಳಿಸಲಾಗುವುದು.

ಆಯಾ ಹುದ್ದೆಗಳಿಗೆ ನಿಗಧಿಪಡಿಸಿದ ಲಿಖಿತ ಪರೀಕ್ಷೆಯ ದಿನಾಂಕ, ಪ್ರವೇಶ ಪತ್ರ ನೀಡಿಕೆ (admission ticket) ಮತ್ತು ಸಂದರ್ಶನದ ದಿನಾಂಕಗಳನ್ನು ಬ್ಯಾಂಕಿನ ಜಾಲ ತಾಣದಲ್ಲಿ (website) <u>www.recruit-app.com/cdccb-2015</u> ರಲ್ಲಿ ಪ್ರಕಟಿಸಲಾಗುವುದು. ಜಾಲ ತಾಣದಲ್ಲಿ ಪ್ರಕಟಿಸುವ ಬಗ್ಗೆ ದಿನಪತ್ರಿಕೆಗಳಲ್ಲಿ ಪತ್ರಿಕಾ ಪ್ರಕಟಣೆ ನೀಡಲಾಗುವುದು. ಅಭ್ಯರ್ಥಿಗಳು ಜಾಲ ತಾಣದಲ್ಲಿ ತಿಳಿಸಿರುವ ಸೂಚನೆಗಳನ್ನು ಅನುಸರಿಸಿ ಪ್ರವೇಶ ಪತ್ರ ಪಡೆದು ಲಿಖಿತ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಹಾಜರಾಗತಕ್ಕದ್ದು. ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

**ದುರ್ನಡತೆ:–**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ/ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು / ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ / ಆಯ್ಕೆಯಿಂದ ಯಾವುದೇ ತರಹದ ಅನುಮಾನ ಬಂದಿದ್ದಲ್ಲಿ ಯಾವುದೇ ಹಂತದಲ್ಲಿ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಸಹಿ/–
(ಇಲ್ಯಾಸ್‌ಉಲ್ಲಾ ಷರೀಫ್ )
ವ್ಯವಸ್ಥಾಪಕ ನಿರ್ದೇಶಕರು ಹಾಗೂ
ಸದಸ್ಯರು, ನೇಮಕಾತಿ ಸಮಿತಿ,
ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ.,
ಚಿತ್ರದುರ್ಗ.

DISTRICT CO-OP CENTRAL BANK LTD. Chitradurga

(ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

**ನಮೂನೆ – ಡಿ**

**(ನಿಯಮ 3ಎ (2) (3) ನೋಡಿ)**

**ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

## ಪ್ರಮಾಣ ಪತ್ರ

.................................................. ರಾಜ್ಯದ / ಕೇಂದ್ರಾಡಳಿತ ಪ್ರದೇಶದ * .............................. ಜಿಲ್ಲೆಯ / ವಿಭಾಗದ ................................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ................................ ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ................................ ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

◆◆ ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950

◆◆ ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950

◆◆ ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950

◆◆ ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

◆◆ ಸಂವಿಧಾನ

◆◆ ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956

◆◆ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.

◆◆ ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962

◆◆ ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964

◆◆ ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967

◆◆ ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988

◆◆ ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * .................................................. ಮತ್ತು / ಅಥವಾ ಅವನ* / ಅವಳ* ಕುಟುಂಬವು ..............................................................................................ರಾಜ್ಯ / ಕೇಂದ್ರಾಡಳಿತ ಪ್ರದೇಶದ .................................................................. ಜಿಲ್ಲಾ / ವಿಭಾಗದ ........................................ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ........................................................

ತಹಶೀಲ್ದಾರ್..........................................

ಸ್ಥಳ : ಪದನಾಮ

ದಿನಾಂಕ: ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *

* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ: ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಇ

(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

ಗ್ರಾಮ / ಪಟ್ಟಣದ / ನಗರ ನಿವಾಸಿಯಾದ

ಶ್ರೀ / ಶ್ರೀಮತಿ ಇವರ ಮಗ / ಮಗಳು / ಪತ್ನಿ /

ಪತಿಯಾದ ಶ್ರೀ / ಶ್ರೀಮತಿ ಇವರು ಹಿಂದುಳಿದ ವರ್ಗಗಳ (ಪ್ರವರ್ಗ)

ಜಾತಿಯ ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣಿಕರಿಸಲಾಗಿದೆ.

ಸ್ಥಳ :

ದಿನಾಂಕ :

ತಹಶೀಲ್ದಾರ್

ತಾಲ್ಲೂಕು

ಕಛೇರಿಯ ಮೊಹರು

ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಎಫ್

(ನಿಯಮ 3ಎ (2) (3)ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು
ಜಾತಿ ಪ್ರಮಾಣ ಪತ್ರ

ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ (ಕ್ರೀಮಿಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

ಅಥವಾ

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.11400–21600/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

ಅಥವಾ

ಆತನ / ಅಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು 4.5 ಲಕ್ಷ ರೂಪಾಯಿಗಳಿಗಿಂತ ಮೀರುವುದಿಲ್ಲವೆಂದು (ಸರ್ಕಾರದ ಆದೇಶ ಸಂಖ್ಯೆ: ಹಿಂವಕ 192 ಬಿಸಿಎ 2013 ಬೆಂಗಳೂರು, ದಿ: 04–09–2013) ;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 20 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಶ್ರೀ / ಶ್ರೀಮತಿ / ಕುಮಾರಿ ಇವರು ಜಾತಿಗೆ ಸೇರಿದ ಉಪ ಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ ಮತ್ತು ಈ ಕುಟುಂಬದ ವಾರ್ಷಿಕ ಆದಾಯವು ರೂ:
(ರೂ: ಮಾತ್ರ) ಎಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :
ದಿನಾಂಕ:

ತಹಶೀಲ್ದಾರ್
ತಾಲ್ಲೂಕು
ಕಛೇರಿಯ ಮೊಹರು

## ನಮೂನೆ – 1

## ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:
ತಹಶೀಲ್ದಾರರು
ತಾಲ್ಲೂಕು
ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ಎಂಬುವವರ ಮಗ / ಮಗಳು / ಪತಿ / ಪತ್ನಿ ಆದ ನಾನು ಮೇಲುಸ್ತರದಲ್ಲಿ (**Creamy Layer**) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :

   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   **1)** ವೇತನ ಶ್ರೇಣಿ
   **2)** ಜಮೀನಿನ ವಿವರ
   **3)** ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?
11. ಮಾರಾಟ ತೆರಿಗೆ ಪಾವತಿದಾರರೇ?

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

**ಸ್ಥಳ:** ತಮ್ಮ ವಿಧೇಯ
**ದಿನಾಂಕ:** (ಅಭ್ಯರ್ಥಿಯ ಸಹಿ)

**ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗುರುತ್ತೇನೆ.**

**ಸ್ಥಳ:** ತಂದೆ/ತಾಯಿ/ಪೋಷಕರ ಸಹಿ
ದಿನಾಂಕ: (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

**ಸ್ಥಳೀಯ ಇಬ್ಬರು ಸಾಕ್ಷಿದಾರರು**

**ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.**

**ಸಕ್ಷಿದಾರರ ಸಹಿ** 1)

**(ಪೂರ್ಣ ವಿಳಾಸದೊಂದಿಗೆ)** 2)

**ಪರಿಶೀಲನಾ ಪ್ರಮಾಣ ಪತ್ರ**

**1. ಶ್ರೀ/ಶ್ರೀಮತಿ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ಎಂಬುವವರು ಕರ್ನಾಟಕ ರಾಜ್ಯದ ಜಿಲ್ಲೆಯ ವಿಭಾಗ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.**

**2. ಶ್ರೀ/ಶ್ರೀಮತಿ/ಕುಮಾರಿ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.**

**ಸ್ಥಳ** ತಹಶೀಲ್ದಾರ್.
ತಾಲ್ಲೂಕು,
**ಬೆಂಗಳೂರು** ಕಛೇರಿಯ ಮೊಹರು

**ಸೂಚನೆ–1 : ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.**

**ಸೂಚನೆ–2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು**

## ನಮೂನೆ – 2

## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ಒಂದನೇ ತರಗತಿಯಿಂದ ತರಗತಿಯವರೆಗೆ ಜಿಲ್ಲೆ ತಾಲ್ಲೂಕು ಪಟ್ಟಣ ಶಾಲೆಯಲ್ಲಿ ವ್ಯಾಸಂಗ ಮಾಡಿ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

| | |
|---|---|
| ಮೇಲು ರುಜು | ಸಹಿ |
| ಕ್ಷೇತ್ರ ಶಿಕ್ಷಣ ಅಧಿಕಾರಿ | ಮುಖ್ಯೋಪಾಧ್ಯಾಯರ ಸಹಿ |
| ಕಛೇರಿಯ ಮೊಹರು | ಮತ್ತು ಸಂಸ್ಥೆಯ ಮೊಹರು |

ಸ್ಥಳ :
ದಿನಾಂಕ :

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ನೇ ತರಗತಿಯಿಂದ ನೇ ತರಗತಿಯವರೆಗೆ ಶೈಕ್ಷಣಿಕ ವರ್ಷದಿಂದ ಶೈಕ್ಷಣಿಕ ವರ್ಷದವರೆಗೆ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:
ದಿನಾಂಕ:

ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆಸೆನಿ 2005, ದಿನಾಂಕ: 19.11.2005

# CERTIFICATE FOR THE PERSONS WITH DISABILITIES

This is to certify that Sri / Smt / Kum ………………………………………………… son / wife / daughter of Shri …………………………………………….. …………………….Age ………………………… old, male / female, Registration No …………………………… is a case of ………………………... He / She is physically disabled/visual disabled/speech & hearing disabled and has …………………….. % (……………………percent) permanent (physical impairment visual impairment speech & hearing impairment) in relation to his / her ……………………………

Note :

1. This condition is progressive/non-progressive/likely to improve/not likely to improve. *
2. Re-assessment is not recommended/is recommended after a period of ………………… months/years. *

* Strike out which is not applicable

(Recent Attested
Photograph showing
the disability
affixed here)

| | | |
|---|---|---|
| Sd/- | Sd/- | Sd/- |
| (Doctor) | (Doctor) | (Doctor) |
| (Seal) | (Seal) | (Seal) |

Countersigned by the
Medical Superintendent CMO/Head
of Hospital (with seal)

Signature / Thumb impression
of the disabled person

**Explanation**:-As per Notification No. DPAR 50 SRR 2000 dated 03-09-2005 " Physically Handicapped candidates " or " person with disability " means a person suffering from not less than forty percent of any of the following disabilities :- (1) Blindness (2) Low Vision (3) Hearing impairment (4) Locomotor disability (5) Leprosy cured (6) Mental retardation (7) Mental illness.
-¥À (1)Blindness refers to a condition where a person suffers from any of the following conditions, namely:- (a)Total absence of sight; or (b) Visual acuity not exceeding 6/60 or 20/200 (Snellen) in the better eye with correcting lenses; or (c) limitation of the field of vision subtending an angle of 20 degree or worse;(2) Person with low vision means a person with impairment of visual functioning even after treatment or standard refractive correction, but who uses or is potentially capable of using vision for the planning or execution of a task with appropriate assistive device;(3) Hearing impairment means loss of sixty decibels or more in the better ear in the conversational range of frequencies.(4) Locomotor disability means disability of the bones, joints or muscles leading to substantial restriction of the movement of the limbs or any form of cerebral palsy.(5) Leprosy cured:-means any person who has been cured of Leprosy, but is suffering from, (i) Loss of sensation in hands or feet as well as loss of sensation & paresis in the eye & eyelid, but with no manifest deformity;(ii)manifest deformity & paresis but having sufficient mobility in their hands & feet to enable them to engage in normal economic activity; (iii) extreme physical deformity as well as advanced age which prevents him from undertaking any gainful occupation; and the expressesion " Leprosy cured " shall be construed accordingly; (6) Mental Retardation:-means a condition of arrested or incomplete development of mind of a person who is specially characterised by sub normality of intelligence; (7) Mental Illness:- means any mental disorder other than mental retardation.

ರಾಜ್ಯ ಸರ್ಕಾರಿ / ಕೇಂದ್ರ ಸರ್ಕಾರಿ ನೌಕರರು ಒದಗಿಸಬೇಕಾದ ಪ್ರಮಾಣ ಪತ್ರ

ಶ್ರೀ / ಶ್ರೀಮತಿ________________________________________________________ರವರು ರಾಜ್ಯ / ಕೇಂದ್ರ ಸರ್ಕಾರದಲ್ಲಿ------------------------------------------------------------ ___________________________(ಪದನಾಮ)____________________ ---------------------- ______________________________________________________ಇಲಾಖೆಯಲ್ಲಿ ಖಾಯಂ / ತಾತ್ಕಾಲಿಕ ಹುದ್ದೆಯನ್ನು ದಿನಾಂಕ .________________ರಿಂದ _________________________ ರವರೆಗೆ ಹೊಂದಿರುವರು. ಈ ಹುದ್ದೆಗೆ ಇವರು ನೇಮಕಾತಿ ನಿಯಮಗಳಡಿ ಆಯ್ಕೆಯಾಗಿದ್ದು, ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅವರಿಗೆ ಅನುಮತಿ ನೀಡಲಾಗಿದೆ.

ಸ್ಥಳ:<br>ದಿನಾಂಕ

ನೇಮಕಾತಿ ಪ್ರಾಧಿಕಾರದ ಸಹಿ/<br>ಇಲಾಖೆಯ ಹೆಸರು ಮತ್ತು ಮೊಹರುನೊಂದಿಗೆ

## CERTIFICATE TO BE FURNISHED BY THE STATE/CENTRAL GOVT. SERVANTS

**Certified that Sri / Smt ………………………………………………...holds a permanent / temporary post under the State / Central Govt. as …………………………...(Designation) in the dept. of …………………………………………… from…………………………having been appointed therein under the rules of recruitment. He /She is permitted to apply for the said post.**

**Place :**<br>**Date:**

**Signature of the appointing authority**<br>**of the department / with name and seal.**